## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :-** ಶ್ರೀ ಆರ್.ಟಿ.ನಾಗಣ್ಣ, 'ಡಿ' ಗ್ರೂಪ್ ನೌಕರ (ನಿವೃತ್ತ)ರವರಿಗೆ ಕೆ.ಸಿ.ಎಸ್.ಆರ್.ನಿಯಮ 247(ಎ)ರಂತೆ ಸೌಲಭ್ಯವನ್ನು ಮಂಜೂರು ಮಾಡುವ ಬಗ್ಗೆ - ಆದೇಶ.

**ಓದಲಾಗಿದೆ :-**1. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ರವರ ಪತ್ರ ಸಂಖ್ಯೆ: ಮುಇಂ / ಪಂರಾಇಂಇ / ಸಿ-18 / 2017-18/ 3671, ದಿನಾಂಕ : 04.09.2017

2. ಸರ್ಕಾರದ ಆದೇಶ ಸಂಖ್ಯೆ: ಆಇ 9 ಎಸ್‌ಆರ್‌ಎ 2012, ದಿ: 08.09.2016 ಮತ್ತು ಆಇ 4 ಎಸ್‌ಆರ್‌ಎ 2016, ದಿ: 10.04.2014.

*****

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ: 04.09.2017ರ ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ಇವರ ಪತ್ರದಲ್ಲಿ ಶ್ರೀ ಆರ್.ಟಿ.ನಾಗಣ್ಣ, ನಿವೃತ್ತ 'ಡಿ' ಗ್ರೂಪ್ ನೌಕರರವರಿಗೆ ಕರ್ನಾಟಕ ನಾಗರಿಕ ಸೇವಾ ನಿಯಮಗಳು ನಿಯಮ 247(ಎ)ರ ಪ್ರಕಾರ ಹೆಚ್ಚುವರಿ ಅರ್ಹತಾದಾಯಕ ಸೇವೆಯನ್ನು ಪಿಂಚಣಿ ಉದ್ದೇಶಕ್ಕೆ ಸೇರ್ಪಡೆ ಮಾಡಲು ಮಂಜೂರಾತಿ ನೀಡುವಂತೆ ಕೋರಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ: 08.09.2016 ಮತ್ತು 10.04.2016ರ ಆರ್ಥಿಕ ಇಲಾಖೆಯ ಆದೇಶಗಳಲ್ಲಿ ಪ್ರಾರಂಭದಲ್ಲಿ ದಿನಗೂಲಿ ಅಥವಾ ಮಿತವೇತನ ಪದವೀಧರರಾಗಿ ನೇಮಕಾತಿ ಹೊಂದಿ, ತದನಂತರ ಕ್ರಮಬದ್ಧಗೊಳಿಸಲಾದ ಸರ್ಕಾರಿ ನೌಕರರ ಪ್ರಕರಣಗಳಲ್ಲಿ ಅವರ ನಿವೃತ್ತಿ ಸಮಯದಲ್ಲಿ ಜಾರಿಯಲ್ಲಿದ್ದ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ ನಿಯಮ 247(ಎ)ರಲ್ಲಿನ ಅವಕಾಶಗಳನ್ವಯ ಸಂಬಂಧಪಟ್ಟ ಎಲ್ಲಾ ಅಗತ್ಯ ಮಾಹಿತಿ/ ದಾಖಲೆಗಳನ್ನು ಪರಿಶೀಲಿಸಿ, ಅರ್ಹ ಪ್ರಕರಣಗಳಲ್ಲಿ ಹೆಚ್ಚುವರಿ ಸೇವೆಯ ಸೇರ್ಪಡೆ ಅಧಿಕಾರವನ್ನು ಆಯಾ ಆಡಳಿತ ಇಲಾಖೆಯ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ ರವರಿಗೆ ಪ್ರತ್ಯಾಯೋಜಿಸಲಾಗಿದೆ.

ಸರ್ಕಾರವು ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ಮಾಹಿತಿ ಮತ್ತು ದಾಖಲೆಗಳನ್ನು ಪರಿಶೀಲಿಸಿದೆ. ಶ್ರೀ ಆರ್.ಟಿ.ನಾಗಣ್ಣ, ನಿವೃತ್ತ 'ಡಿ' ಗ್ರೂಪ್ (ನಿವೃತ್ತ) ಇವರ ಜನ್ಮ ದಿನಾಂಕ : 01.06.1955 ಆಗಿದ್ದು, ಇವರು ಮೂಲತಃ ದಿನಗೂಲಿ ಆಧಾರದ ಮೇಲೆ 'Skilled Mazdoor'ಯಾಗಿ ಕಾರ್ಯನಿರ್ವಹಿಸುತ್ತಿದ್ದ ಶ್ರೀಯುತರನ್ನು ಕೊಳವೆ ಬಾವಿ ಕೊರೆಯುವ ಉಪ-ವಿಭಾಗ (ನಂ.3), ಬೆಂಗಳೂರು ಇಲ್ಲಿ ದಿನಾಂಕ: 14.01.1991 ರಿಂದ ಸರ್ಕಾರಿ ಸೇವೆಯಲ್ಲಿ ಸಕ್ರಮಗೊಳಿಸಿದ್ದು, ಒಟ್ಟಾರೆ 24 ವರ್ಷ 04 ತಿಂಗಳು 17 ದಿವಸಗಳು ಅರ್ಹತಾದಾಯಕ ಸೇವೆ ಸಲ್ಲಿಸಿ, ದಿನಾಂಕ: 31.05.2015ರಂದು ವಯೋನಿವೃತ್ತಿ ಹೊಂದಿರುತ್ತಾರೆ. ಸದರಿ ದಿನಾಂಕದಂದು ಜಾರಿಯಲ್ಲಿದ್ದ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ

ನಿಯಮ 247(ಎ)ರ ಅವಕಾಶದನುಸಾರ ಗರಿಷ್ಟ ಎರಡು ವರ್ಷಗಳ ಹೆಚ್ಚುವರಿ ಅರ್ಹತಾ ಸೇವೆಯನ್ನು ಮಂಜೂರು ಮಾಡಬಹುದಾಗಿದ್ದು, ಅದರಂತೆ ಎರಡು ವರ್ಷಗಳ ಅಧಿಕ ಅರ್ಹತಾ ಸೇವಾವಧಿಯನ್ನು ಪಿಂಚಣಿ / ನಿವೃತ್ತಿ ಸೌಲಭ್ಯಗಳ ಉದ್ದೇಶಕ್ಕೆ ಮಂಜೂರು ಮಾಡಲು ತೀರ್ಮಾನಿಸಿದೆ. ಆದುದರಿಂದ ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 354 ಜಿಪಅ 2017, ದಿನಾಂಕ: 21.09.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಸರ್ಕಾರವು ಶ್ರೀ ಆರ್.ಟಿ.ನಾಗಣ್ಣ, ನಿವೃತ್ತ 'ಡಿ' ಗ್ರೂಪ್ (ನಿವೃತ್ತ)ರವರಿಗೆ ಕರ್ನಾಟಕ ನಾಗರಿಕ ಸೇವಾ ನಿಯಮಗಳು ನಿಯಮ 247(ಎ)ರ ಪ್ರಕಾರ ಎರಡು ವರ್ಷಗಳ ಹೆಚ್ಚುವರಿ ಅರ್ಹತಾದಾಯಕ ಸೇವೆಯನ್ನು ಪಿಂಚಣಿ ಉದ್ದೇಶಕ್ಕೆ ಸೇರ್ಪಡೆ ಮಾಡಲು ಮಂಜೂರಾತಿ ನೀಡಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

21/9/2017

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:-

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು. **(ಮೂಲ ಸೇವಾ ಪುಸ್ತಕದೊಂದಿಗೆ – ನೊಂದಣಿ ಅಂಚೆ ಮೂಲಕ/ಸ್ವೀಕೃತಿ ಬಾಕಿ).**
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು (ನಗರ).
4. ಕಾರ್ಯನಿರ್ವಾಹಕ ಇಂಜಿನಿಯರವರ ಕಛೇರಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ / ಯೋಜನಾ ವಿಭಾಗ, ಬೆಂಗಳೂರು (ನಗರ)
5. ಶ್ರೀ ಆರ್.ಟಿ.ನಾಗಣ್ಣ, 'ಡಿ' ಗ್ರೂಪ್ ನೌಕರ (ನಿವೃತ್ತ), ರಾಜಗೆರೆ, ಉತ್ತರಿ ದುರ್ಗ ಹೋಬಳಿ, ತಾಲ್ಲೂಕ್ ಕುಣಿಗಲ್, ತುಮಕೂರು ಜಿಲ್ಲೆ.

ಪ್ರತಿಯನ್ನು:-

1. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಸೇವೆಗಳು-1)
2. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ) ಇವರುಗಳ ಆಪ್ತ ಕಾರ್ಯದರ್ಶಿ/ ಆಪ್ತ ಸಹಾಯಕರಿಗೆ
3. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ
4. ರಕ್ಷಾ ಕಡತ/ ಸೂಚನಾ ಫಲಕ/ ಹೆಚ್ಚುವರಿ ಪ್ರತಿಗಳು.

--